**ಓ.ಎಸ್. ನಂ. 186/2015 ಪಿ.ಡಬ್ಲೂ-1 ಹೆಸರು - ಮಹಾಲಕ್ಷ್ಮಿ ಎಸ್.**

**ಸಾಕ್ಷಿಯನ್ನು ದಿನಾಂಕಃ 25/03/2023 ರಂದು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ ಶ್ರೀ. ಕೆ.ಎಸ್.ಎಂ. 1 ನೇ ಪ್ರತಿವಾದಿ ಪರ ವಕೀಲರಿಂದಃ-**

ದಾವಾ ಸ್ವತ್ತು ಸರ್ವೆ ನಂಬರ್ 224/3 ರಲ್ಲಿ ಇದೆ. ನನ್ನ ತಂದೆಗೆ ಭೂ ನ್ಯಾಯ ಮಂಡಳಿಯಿಂದ 24 ಗುಂಟೆ ಮಂಜೂರಾಗಿತ್ತು. ಭೂ ನ್ಯಾಯ ಮಂಡಳಿಯ ಆದೇಶವನ್ನು ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. 24 ಗುಂಟೆ ಜಮೀನಿನ ಖಾತೆ ನನ್ನ ತಂದೆಯ ಹೆಸರಿನಲ್ಲಿ ಇತ್ತು ಎಂದು ತೋರಿಸಲು ದಾಖಲಾತಿ ಹಾಜರುಪಡಿಸಿಲ್ಲ. ನನ್ನ ತಂದೆ ಸದರಿ 24 ಗುಂಟೆ ಜಮೀನಿನ ಮಾಲೀಕತ್ವ ಕೋರಿ ಅಸಲು ದಾವಾ ಸಂಖ್ಯೆ 30/1996 ರಂತೆ ಮಾಲೀಕತ್ವ ಕೋರಿ ಘೋಷಣಾತ್ಮಕ ಪರಿಹಾರ ಮತ್ತು ನಿರ್ಭಂಧಕಾಜ್ಞೆ ಕೋರಿ ನಂಜನಗೂಡಿನ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರ ನ್ಯಾಯಾಲಯದಲ್ಲಿ ದಾವೆ ಹೂಡಿದ್ದರು ಎಂದರೆ ಗೊತ್ತಿಲ್ಲ. ಸದರಿ ದಾವೆ ವಜಾ ಆಗಿದೆ ಎಂದರೆ ನನಗೆ ಗೊತ್ತಿಲ್ಲ. ನನ್ನ ತಂದೆ ತೀರಿಕೊಂಡ ನಂತರ ತಾಯಿಯ ಹೆಸರಿಗೆ ಸರ್ವೆ ನಂಬರ್ 224/3 ರ 24 ಗುಂಟೆಗೆ ಖಾತೆಯಾದ ಬಗ್ಗೆ ದಾಖಲಾತಿ ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ನಿಪಿ-1 ದಾನ ಪತ್ರದಲ್ಲಿ ದಾವಾ ಸ್ವತ್ತು ನನ್ನ ತಾಯಿಯ ಸ್ವಯಾರ್ಜಿತ ಎಂದು ನಮೂದು ಇದ್ದು ಆ ಬಗ್ಗೆ ದಾಖಲಾತಿಯನ್ನು ಹಾಜರುಪಡಿಸಿದ್ದೀರಾ ಎಂದರೆ ಸಾಕ್ಷಿಯು ನನ್ನ ತಂದೆಯಿಂದ ತಾಯಿಗೆ ಬಂದಿರುತ್ತದೆ ಎಂದು ನುಡಿಯುತ್ತಾರೆ. ನಿಪಿ-4 ಸರ್ವೆ ನಂಬರ್ 224/3 ಕ್ಕೆ ಸಂಬಂಧಪಟ್ಟದಲ್ಲ ಮತ್ತು ಅದನ್ನು ಈ ದಾವೆಗಾಗಿ ಸೃಷ್ಟಿಸಿಕೊಂಡಿದ್ದೇನೆ ಎಂದರೆ ಸರಿಯಲ್ಲ. ಮನೆ ಕಟ್ಟಲು ಗ್ರಾಮ ಪಂಚಾಯಿತಿಯಿಂದ ಪರವಾನಿಗೆ ಪಡೆದ ಬಗ್ಗೆ ದಾಖಲಾತಿ ಹಾಜರುಪಡಿಸಿಲ್ಲ ಎಂದರೆ ಸರಿಯಲ್ಲ. ದಾವಾ ವರ್ಷಕ್ಕೆ ಸಂಬಂಧಪಟ್ಟಂತೆ ದಾವಾ ಸ್ವತ್ತಿಗೆ ಸಂಬಂಧಪಟ್ಟ ಅಸಸ್ ಮೆಂಟ್ ಎಕ್ಸ್ ಟ್ರಾಕ್ಟ್ ಹಾಜರುಪಡಿಸಿಲ್ಲ ಎಂದರೆ ನನ್ನ ವಕೀಲರಿಗೆ ನೀಡಿದ್ದೇನೆ ಎಂದು ನುಡಿಯುತ್ತಾರೆ. ನಾನು ದಾವಾ ಸ್ವತ್ತಿನ ಸ್ವಾಧೀನದಲ್ಲಿ ಇರದೇ ಇದ್ದರೂ ಕೂಡ ಪ್ರತಿವಾದಿಯರಿಗೆ ತೊಂದರೆ ನೀಡುವ ಸಲುವಾಗಿ ಸುಳ್ಳು ದಾವೆ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

ನನ್ನ ಉಕ್ತಲೇಖನದ ಮೇರೆಗೆ ತೆರದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲಾಯಿತು.

**ಓ ಹೇ ಕೇ ಸ ಇದೆ ಎಂ ಒ**

ಸಹಿ/-

**1 ನೇ ಹೆಚ್ಚುವರಿ ಸಿ.ಜೆ ಮತ್ತು ಪ್ರದನ್ಯಾದಂ**

**ನಂಜನಗೂಡು**